KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER :
ದಿನಾಂಕ : DATE : 07/06/2019

### ಸಚಿವ ಸಂಪುಟ ಸಭೆ ಒಪ್ಪಿಗೆ: ಏಜೆನ್ಸಿ ನೇಮಕಕ್ಕೆ ಮಾರ್ಗಸೂಚಿ ರೂಪಿಸಲು ನಿರ್ಧಾರ

# ಕುಡಿಯುವ ನೀರಿನ ಘಟಕ ನಿರ್ವಹಣೆ ಹೊಣೆ ಖಾಸಗಿಗೆ

7-6-19

ಪ್ರಜಾವಾಣಿ ವಾರ್ತೆ

ಬೆಂಗಳೂರು: ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಯನ್ನು ಖಾಸಗಿ ಏಜೆನ್ಸಿಗೆ ವಹಿಸಲು ಸಚಿವ ಸಂಪುಟ ಸಭೆ ಗುರುವಾರ ಒಪ್ಪಿಗೆ ನೀಡಿದೆ.

ಗ್ರಾಮ ಪಂಚಾಯ್ತಿಗಳು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸರಿಯಾಗಿ ನಿರ್ವಹಿಸದೇ ಕೆಟ್ಟು ಹೋಗುತ್ತಿರುವ ಬಗ್ಗೆ ವ್ಯಾಪಕ ದೂರುಗಳು ಬರುತ್ತಿವೆ. ಈ ಸಂಬಂಧ 7- 8 ತಿಂಗಳು ಅಧ್ಯಯನ ನಡೆಸಿದ ಬಳಿಕ ಏಜೆನ್ಸಿ ನೇಮಿಸುವ ಸಂಬಂಧ ಮಾರ್ಗಸೂಚಿ ರೂಪಿಸಲು ನಿರ್ಧರಿಸಲಾಯಿತು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೃಷ್ಣ ಬೈರೇಗೌಡ ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.

'ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆಗೆ ಸಂಬಂಧಿಸಿದಂತೆ ಇಲ್ಲಿಯವರೆಗೆ ಯಾವುದೇ ರಾಜ್ಯದಲ್ಲೂ ನೀತಿ ರೂಪಿಸಿಲ್ಲ. ನಾವೇ ಮೊದಲ ಬಾರಿಗೆ ನೀತಿ ರೂಪಿಸುತ್ತಿದ್ದೇವೆ. ತಾಲ್ಲೂಕನ್ನು ಘಟಕವನ್ನಾಗಿ ಮಾಡಿ ನಿರ್ವಹಣೆಯ ಏಜೆನ್ಸಿಗಳನ್ನು ಟೆಂಡರ್ ಮೂಲಕ ನಿಗದಿ ಮಾಡಲಾಗುವುದು. ಘಟಕಗಳು ಕೆಟ್ಟು ಹೋದರೆ ರಿಪೇರಿ ಮಾಡುವುದೂ ಸೇರಿದಂತೆ ಎಲ್ಲ ಜವಾಬ್ದಾರಿಯೂ ಏಜೆನ್ಸಿಗಿರುತ್ತದೆ' ಎಂದು ಸಚಿವರು ತಿಳಿಸಿದರು.

'ಪ್ರತಿ ತಾಲೂಕಿಗೆ ಒಂದರಂತೆ ನಿರ್ವಹಣಾ ಪ್ಯಾಕೇಜ್ ಅನ್ನು ಟೆಂಡರ್ ಮೂಲಕ ಅರ್ಹ ಸಂಸ್ಥೆಗಳಿಗೆ ಒದಗಿಸಲು ಗ್ರಾಮ ಪಂಚಾಯತ್‌ಗೆ ಅಧಿಕಾರ ನೀಡಲಾಗುವುದು. ಒಂದು ವೇಳೆ ಗ್ರಾಮ ಪಂಚಾಯ್ತಿಗಳು ಏಜೆನ್ಸಿ ಬದಲಿಗೆ ತಾವೇ ನಿರ್ವಹಣೆ ಮಾಡುತ್ತೇವೆ ಎಂದು ಹೇಳಿದರೆ, ಅದಕ್ಕೂ ಅವಕಾಶ ನೀಡುತ್ತೇವೆ. ಏಜೆನ್ಸಿಯನ್ನೇ ನೇಮಿಸಿಕೊಳ್ಳಬೇಕು ಎಂಬ ಒತ್ತಡ ಹೇರುವುದಿಲ್ಲ' ಎಂದರು.

ರಾಜ್ಯದಲ್ಲಿ ಈಗಾಗಲೇ ಕೆಟ್ಟು ನಿಂತಿರುವ ಘಟಕಗಳನ್ನು ಒಂದು ಬಾರಿಗೆ ದುರಸ್ತಿ ಮಾಡಿಸಲು ಸರಾಸರಿ ₹ 3 ಸಾವಿರ ನೀಡಲಾಗುವುದು. ಒಂದು ವೇಳೆ ದುರಸ್ತಿ ವೆಚ್ಚ ಹೆಚ್ಚಾದರೆ ಅದನ್ನು ನಾವೇ ಭರಿಸುತ್ತೇವೆ. 1 ಲೀಟರ್ ನೀರಿನ ನಿರ್ವಹಣೆಗೆ 35 ಪೈಸೆ ವೆಚ್ಚವಾಗುತ್ತದೆ. ಏಜೆನ್ಸಿಗಳಿಗೆ ಪ್ರತಿ ಲೀಟರ್ ನಿರ್ವಹಣೆಗೆ 25 ಪೈಸೆ ನೀಡಲು ನಾವು ತೀರ್ಮಾನಿಸಿದ್ದೇವೆ. 10 ಪೈಸೆಗಳ ವ್ಯತ್ಯಾಸವನ್ನು ಸರ್ಕಾರವೇ ಭರಿಸಲಿದೆ ಎಂದು ಕೃಷ್ಣ ಬೈರೇಗೌಡ ಅವರು ತಿಳಿಸಿದರು.

### ಮುಖ್ಯಾಂಶಗಳು

- ರಾಜ್ಯದಲ್ಲಿ 18,582 ಘಟಕ
- 16,00 ಘಟಕಗಳ ನಿರ್ವಹಣಾ ಅವಧಿ ಮುಕ್ತಾಯ
- 100 ಕ್ಕಿಂತ ಹೆಚ್ಚು ಘಟಕಗಳಿಗೆ ಹೆಚ್ಚುವರಿ ಪ್ಯಾಕೇಜ್

### ಇತರ ಪ್ರಮುಖ ನಿರ್ಣಯಗಳು

- ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಕೆರೆಗಳಿಗೆ ಬೆಂಗಳೂರಿನ ತ್ಯಾಜ್ಯ ನೀರನ್ನು ಶುದ್ಧೀಕರಿಸಿ ತುಂಬಿಸುವ 2 ನೇ ಹಂತದ ಯೋಜನೆಗೆ ₹455 ಕೋಟಿ ನೀಡಲು ಒಪ್ಪಿಗೆ. 250 ಕೆರೆಗಳಿಗೆ ನೀರು ತುಂಬಿಸಲಾಗುವುದು.
- ಮೈಸೂರು ವೈದ್ಯಕೀಯ ಕಾಲೇಜಿನ ಗ್ರಂಥಾಲಯ, ಉಪನ್ಯಾಸ ಕೊಠಡಿ, ಪುರುಷರು ಮತ್ತು ಮಹಿಳೆಯರ ಹಾಸ್ಟೆಲ್ ಕಾಮಗಾರಿಗೆ ₹120 ಕೋಟಿ ನೀಡಲು ಒಪ್ಪಿಗೆ.
- ಕೊಪ್ಪಳ ವೈದ್ಯಕೀಯ ಕಾಲೇಜನ್ನು 450 ಹಾಸಿಗೆಗಳ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸುವುದು ಸೇರಿದಂತೆ ವಿವಿಧ ಕಾಮಗಾರಿಗಳಿಗೆ ₹104 ಕೋಟಿ ನೀಡಲು ಅನುಮತಿ.

### ನಾಣ್ಯದ ಬದಲಿಗೆ ಸ್ಮಾರ್ಟ್ ಕಾರ್ಡ್

ರಾಜ್ಯದ ಎಲ್ಲ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಈಗ ಇರುವ ನಾಣ್ಯದ ಬೂತ್‌ಗಳ ಬದಲಿಗೆ ಸ್ಮಾರ್ಟ್‌ಕಾರ್ಡ್ ಬೂತ್‌ಗಳನ್ನು ಅಳವಡಿಸಲಾಗುವುದು ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಕಾಯಿನ್ ಬೂತ್‌ಗಳನ್ನು ಸ್ಮಾರ್ಟ್ ಕಾರ್ಡ್ ಬೂತ್‌ಗಳನ್ನಾಗಿ ಪರಿವರ್ತಿಸುವುದಕ್ಕೆ ಅಗತ್ಯವಿರುವ ತಲಾ ₹15 ಸಾವಿರವನ್ನು ಸರ್ಕಾರವೇ ಭರಿಸುತ್ತದೆ. ನಾಣ್ಯದ ಕೊರತೆಯ ಸಮಸ್ಯೆ ಒಂದಾದರೆ, ನಾಣ್ಯದಂತಹ ದುಂಡಗಿನ ಲೋಹವನ್ನು ಹಾಕಿ ಘಟಕಗಳನ್ನು ಕೆಡಿಸುತ್ತಿರುವ ಸಾಕಷ್ಟು ಪ್ರಕರಣಗಳು ವರದಿಯಾಗಿವೆ. ಸ್ಮಾರ್ಟ್ ಕಾರ್ಡ್‌ಗಳನ್ನು ಅತ್ಯಂತ ಸುಲಭವಾಗಿ ಬಳಸಬಹುದಾಗಿದೆ ಎಂದರು.

## ಜಿಂದಾಲ್‌ಗೆ ಭೂಮಿ: ಸರ್ಕಾರದ ಸಮರ್ಥನೆ, ಕೆಪಿಎಸ್‌ಸಿ ಸುಗ್ರೀವಾಜ್ಞೆಗೂ ಸಮ್ಮತಿ

ಬೆಂಗಳೂರು: ಜಿಂದಾಲ್‌ಗೆ ಭೂಮಿ ಮಾರಾಟ ಮಾಡುವಾಗ ಆ ಕಂಪೆನಿಗೆ ಕೆಲವು ಷರತ್ತುಗಳನ್ನು ವಿಧಿಸಬೇಕು ಎಂದು ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಕೆಲವು ಸಚಿವರು ಒತ್ತಾಯಿಸಿದರು.

ಕನ್ನಡಿಗರ ಮತ್ತು ಸ್ಥಳೀಯರಿಗೆ ಉದ್ಯೋಗಾವಕಾಶ ನೀಡಬೇಕು ಎಂಬುದು ಸಚಿವರ ಬಹು ಮುಖ್ಯ ಬೇಡಿಕೆಯಾಗಿತ್ತು. ಈ ಕುರಿತು ಸುದೀರ್ಘ ಚರ್ಚೆ ನಡೆಯಿತು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಕೃಷ್ಣಬೈರೇಗೌಡ ಹೇಳಿದರು.

**ಮಾರಾಟ ಸಮರ್ಥನೆ:** ಜಿಂದಾಲ್ ಕಂಪನಿಯ ಕಾರ್ಖಾನೆ, ವಸತಿ ಸಮುಚ್ಚಯ, ವಿದ್ಯುತ್ ಉತ್ಪಾದನಾ ಘಟಕ ಇರುವ ಕಾಂಪೌಂಡ್ ಒಳಗಿನ ಜಾಗವನ್ನು ಮಾತ್ರ ಗುತ್ತಿಗೆ ಮತ್ತು ಮಾರಾಟದ ಕರಾರಿನ ಆಧಾರದ ಮೇಲೆ ಭೂಮಿಯನ್ನು ಮಾರಲು ತೀರ್ಮಾನಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಸಮರ್ಥಿಸಿಕೊಂಡರು. ಲೀಸ್ ಕಂ ಸೇಲ್ ಡೀಡ್ 2006 ರಲ್ಲೇ ಆಗಿತ್ತು. ಕಂಪನಿಯು ಷರತ್ತುಗಳನ್ನು ಪೂರೈಸಿರುವುದು ತೃಪ್ತಿದಾಯಕವಾಗಿದ್ದರಿಂದ ಕಾನೂನು ಪ್ರಕಾರವೇ ಮಾರಾಟಕ್ಕೆ ಒಪ್ಪಿಗೆ ನೀಡಲಾಗಿದೆ. ಗಣಿಗಾರಿಕೆ ಭೂಮಿಯನ್ನು ಮಾರಾಟ ಮಾಡಿಲ್ಲ. ಗಣಿಗಾರಿಕೆಯನ್ನು ಲೀಸ್ ಆಧಾರದಲ್ಲಿಯೇ ನೀಡಲಾಗಿದೆ ಎಂದರು.

**ಅಧಿಕಾರಿಗಳ ಹಿತ ಕಾಪಾಡುತ್ತೇವೆ:** ಕರ್ನಾಟಕ ಲೋಕಸೇವಾ ಆಯೋಗ(ಕೆಪಿಎಸ್‌ಸಿ) 1998 ರ ಸಾಲಿನಲ್ಲಿ ನಡೆಸಿದ ಅಕ್ರಮ ನೇಮಕಾತಿಗಳನ್ನು ಸಕ್ರಮಗೊಳಿಸಲು ಸುಗ್ರೀವಾಜ್ಞೆ ಹೊರಡಿಸುವ ನಿರ್ಧಾರದಿಂದ ಸರ್ಕಾರ ಹಿಂದಕ್ಕೆ ಸರಿದಿಲ್ಲ. ಬದಲಿಗೆ ಯಾವುದೇ ಅಧಿಕಾರಿಗಳಿಗೆ ಅನ್ಯಾಯ ಆಗದಂತೆ ಎಚ್ಚರಿಕೆ ವಹಿಸಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ.

ಸುಗ್ರೀವಾಜ್ಞೆಯಿಂದ ಸಾಕಷ್ಟು ಅಧಿಕಾರಿಗಳಿಗೆ ಅನ್ಯಾಯವಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿ ಶಾಸಕರು ಸ್ಪೀಕರ್, ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದರು. ಈ ಕುರಿತು ಸಚಿವ ಸಂಪುಟಸಭೆಯಲ್ಲಿ ವ್ಯಾಪಕ ಚರ್ಚೆ ನಡೆಯಿತು ಎಂದು ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

ಸುಗ್ರೀವಾಜ್ಞೆ ಹೊರಡಿಸುವಾಗ 1998 ರ ನಂತರ ನೇಮಕಗೊಂಡ ಗೆಜೆಟೆಡ್ ಪ್ರೊಬೇಷನರಿ ಅಧಿಕಾರಿಗಳ ಮುಂಬಡ್ತಿಗೆ ಮತ್ತು ಅವರ ಹಿತಾಸಕ್ತಿಗೆ ಧಕ್ಕೆಯಾಗದಂತೆ ಕ್ರಮ ಕೈಗೊಳ್ಳಲು ಮುಖ್ಯ ಕಾರ್ಯದರ್ಶಿಯವರಿಗೆ ಸೂಚಿಸಲಾಯಿತು. ಇದಕ್ಕಾಗಿ ಸೂಪರ್ ನ್ಯೂಮರರಿ ಹುದ್ದೆಗಳನ್ನು ಸೃಷ್ಟಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು ಎಂದರು.